ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001

==========================================================================

ಸಂ: ಸಶಿಕ/ಎನ್.ಇ.ಪಿ-2020/2022-23 ದಿನಾಂಕ:20-06-202

: ಸುತ್ತೋಲೆ :

ವಿಷಯ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶಾಲಾ ಬ್ಯಾಗ್ ಹೊರೆ ತಗ್ಗಿಸುವ ಬಗ್ಗೆ.

ಉಲ್ಲೇಖ
1. ಶ್ರೀ ಯಶಪಾಲ ಶರ್ಮಾ ಸಮಿತಿಯ "ಹೊರೆಯಿಲ್ಲದ ಕಲಿಕೆ" 1993 ರ ವರದಿ
2. ಸರ್ಕಾರಿ ಆದೇಶ ಸಂ:ಇಡಿ 107 ಯೋಯೋಕ 2017, ಬೆಂಗಳೂರು, ದಿನಾಂಕ:03-05-2019.
3. ಸರ್ಕಾರದ ತಿದ್ದುಪಡಿ ಆದೇಶ ಸಂ:ಇಡಿ 107 ಯೋಯೋಕ 2017, ಬೆಂಗಳೂರು, ದಿನಾಂಕ:31-05-2019.
4. ಶಿಕ್ಷಣ ಮಂತ್ರಾಲಯ ನವದೆಹಲಿ ಇವರ "ಶಾಲಾಬ್ಯಾಗ್ ನೀತಿ-2020" ಕುರಿತು ಆದೇಶ ದಿನಾಂಕ 24.11.2020
5. ಇ-8146 / ಡಿ.ಎಸ್.ಇ.ಆರ್.ಟಿ / ಇವಿಜಿ / ಸಂಭ್ರಮ ಶನಿವಾರ / 2022-23, ದಿನಾಂಕ 28.10.2022

** ** ** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ 1 ರ ವರದಿಯನ್ವಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಹೊರೆಯಿಲ್ಲದೇ ಸಂತಸದಾಯಕವಾಗಿ ಕಲಿಯುವ ವಾತಾವರಣವನ್ನು ರೂಪಿಸುವ ಸಲುವಾಗಿ Centre for Child and Law, NLSUI, Bengaluru ರವರ ಸಹಯೋಗದೊಂದಿಗೆ ಡಿ.ಎಸ್.ಇ.ಆರ್.ಟಿ ರವರು ಒಂದು ಅಧ್ಯಯನ ನಡೆಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ವರದಿಯಲ್ಲಿ ವಿದ್ಯಾರ್ಥಿಗಳು ಅವರ ದೇಹದ ತೂಕದ ಶೇಕಡ 10 ರಿಂದ 15%ರಷ್ಟು ತೂಕದ ಶಾಲಾ ಬ್ಯಾಗ್‌ಗಳನ್ನು ತೆಗೆದುಕೊಂಡು ಹೋಗಬಹುದಾಗಿ ಮೂಳೆ ತಜ್ಞರು ಶಿಫಾರಸ್ಸು ಮಾಡಿರುತ್ತಾರೆ. ಈ ಕುರಿತು ಉಲ್ಲೇಖ 2ರ ಸರ್ಕಾರಿ ಆದೇಶದಲ್ಲಿ ಕ್ರಮವಹಿಸಲು ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಎಲ್ಲಾ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶಾಲಾ ಬ್ಯಾಗ್ ಹೊರೆ ಕಡಿಮೆ ಮಾಡಲು ಈ ಕೆಳಕಂಡ ಅಂಶಗಳಿಗೆ ಅನುಗುಣವಾಗಿ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.

1) ವಿದ್ಯಾರ್ಥಿಯ ಶಾಲಾಬ್ಯಾಗ್‌ನ ತೂಕವು ಈ ಕೆಳಕಂಡಂತೆ ನಿಗದಿಪಡಿಸಲಾಗಿದ್ದು ಕಡ್ಡಾಯವಾಗಿ ಪಾಲಿಸುವುದು.

| 2) ಕ್ರ.ಸಂ. | 3) ತರಗತಿ | 4) ಶಾಲಾ ಬ್ಯಾಗ್‌ನ ತೂಕ |
|---|---|---|
| 5) 1 | 6) 1 – 2 | 7) 1.5 ರಿಂದ 2 ಕಿ.ಗ್ರಾಂ |
| 8) 2 | 9) 3 – 5 | 10) 2 ರಿಂದ 3 ಕಿ.ಗ್ರಾಂ |
| 11) 3 | 12) 6 – 8 | 13) 3 ರಿಂದ 4 ಕಿ.ಗ್ರಾಂ |
| 14) 4 | 15) 9 – 10 | 16) 4 ರಿಂದ 5 ಕಿ.ಗ್ರಾಂ |

2 1 ಮತ್ತು 2ನೇ ತರಗತಿ ಬೋಧನೆಯು ಬುನಾದಿ ಹಂತದ ಶಿಕ್ಷಣವಾಗಿದ್ದು ವಿದ್ಯಾರ್ಥಿಗಳು ಸಂತಸ ಮತ್ತು ಸಕ್ರಿಯವಾಗಿ ಶಾಲೆಗಳಲ್ಲಿಯೇ ಚಟುವಟಿಕೆ ಮೂಲಕ ಕಲಿಯಲು ಆದ್ಯತೆ ನೀಡುವುದು ಈ ವಿದ್ಯಾರ್ಥಿಗಳಿಗೆ ಕಲಿಕೆಯ ಪುನರ್ಬಲನಕ್ಕಾಗಿ ಯಾವುದೇ ರೀತಿಯ ಗೃಹಪಾಠ ಅಥವಾ ಮನೆಗೆಲಸವನ್ನು ನೀಡದಂತೆ ಕ್ರಮವಹಿಸುವುದು.

3 1 ರಿಂದ 05ನೇ ತರಗತಿಗಳ ವಿದ್ಯಾರ್ಥಿಗಳಿಗೆ ಭಾಷೆ, ಗಣಿತ ಹಾಗೂ ಪರಿಸರ ವಿಜ್ಞಾನ ವಿಷಯ ಹೊರತುಪಡಿಸಿ ಇನ್ನಾವುದೇ ಪಠ್ಯಕ್ರಮವನ್ನು ನಿಗದಿಪಡಿಸದಂತೆ ಕ್ರಮವಹಿಸುವುದು.

4 3 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಕಲಿಕಾ ಬಲವರ್ಧನೆ ಚಟುವಟಿಕೆಗಳನ್ನು ಶಾಲೆಗಳಲ್ಲಿಯೇ ನಿರ್ವಹಿಸುವುದು ಅತ್ಯಂತ ಅಗತ್ಯವಿರುವ ಹಾಗೂ ಪೂರಕವಾಗಿರುವಂತಹ ಚಟುವಟಿಕೆಗಳಿಗೆ ಸೀಮಿತ ಪ್ರಮಾಣದಲ್ಲಿ ಮನೆಗೆಲಸ ನೀಡುವಂತೆ ಕ್ರಮವಹಿಸುವುದು.

5 ವಿದ್ಯಾರ್ಥಿಗಳು ಕಲಿಕೆಯ ಎಲ್ಲಾ ಪಠ್ಯ ಪುಸ್ತಕಗಳು / ನೋಟ್ ಪುಸ್ತಕಗಳು ಮತ್ತು ಅಭ್ಯಾಸ ಪುಸ್ತಕಗಳನ್ನು ಪ್ರತಿ ದಿನವು ತರುವುದನ್ನು ತಪ್ಪಿಸಲು ವಿದ್ಯಾರ್ಥಿಗಳಿಗೆ ಮುಂಚಿತವಾಗಿಯೇ ಆಯಾ ದಿವಸದ ವೇಳಾಪಟ್ಟಿಗೆ ಅನುಗುಣವಾಗಿ ಅಗತ್ಯವಿರುವ ಪುಸ್ತಕಗಳನ್ನು ಮಾತ್ರ ಶಾಲೆಗೆ ತರಲು ಸೂಚನೆ ನೀಡುವುದು.

6 ಅಭ್ಯಾಸ ಚಟುವಟಿಕೆಗಳನ್ನು ಹಾಳೆಗಳಲ್ಲಿ ಮಾಡಿಸಿ ಫೈಲ್ ಮಾಡಿಸುವುದು. ಅವಶ್ಯಕತೆ ಇದ್ದಾಗ ಪರಾಮರ್ಶಿಸಲು ಇವುಗಳನ್ನು ಶಾಲೆಗಳಲ್ಲಿಯೇ ಸಂಗ್ರಹಿಸಿಡಲು ಪ್ರೇರೇಪಿಸುವುದು ಅಥವಾ ಅಭ್ಯಾಸ ಪುಸ್ತಕಗಳನ್ನು ಬಳಸಿದಲ್ಲಿ ಇವುಗಳನ್ನು ಶಾಲೆಗಳಲ್ಲಿಯೇ ಸಂಗ್ರಹಿಸಿಡತಕ್ಕದ್ದು.

7 ವಿದ್ಯಾರ್ಥಿಯು ಮನೆಯಿಂದ ಶಾಲೆಗೆ, ಶಾಲೆಯಿಂದ ಮನೆಗೆ ತೆಗೆದುಕೊಂಡು ಹೋಗುವ ಪಠ್ಯ ಪುಸ್ತಕಗಳು, ನೋಟ್ ಪುಸ್ತಕಗಳು, ಲೇಖನ ಸಾಮಗ್ರಿಗಳು, ಕಲಿಕಾ ಉಪಕರಣಗಳು ಹಾಗೂ ಇನ್ನಿತರ ವಸ್ತುಗಳನ್ನು ತರಗತಿ ಒಳಗೆ ಶೇಖರಿಸಿಡುವಂತೆ ಅಗತ್ಯ ಅನುಕೂಲತೆಗಳನ್ನು ಕಲ್ಪಿಸತಕ್ಕದ್ದು.

8 ಶಾಲಾ ಗ್ರಂಥಾಲಯಗಳಲ್ಲಿ ಶಬ್ದಕೋಶ, ಸಮಾನಾರ್ಥಕ ಪದಕೋಶ. ಅಟ್ಲಾಸ್, ಜ್ಞಾನ ವಿಜ್ಞಾನ ಕೋಶಗಳಂತಹ ಪರಾಮರ್ಶನ ಸಾಮಗ್ರಿಗಳು ಸಾಕಷ್ಟು ಸಂಖ್ಯೆಯಲ್ಲಿ ಲಭ್ಯವಾಗುವಂತೆ ಹಾಗೂ ಮಕ್ಕಳು ಇವುಗಳನ್ನು ಅವಶ್ಯಕತೆ ಇದ್ದಾಗ ಬಳಸಿಕೊಳ್ಳುವಂತೆ ವ್ಯವಸ್ಥೆಮಾಡುವುದು.

9 100 ರಿಂದ 200 ಪುಟ ಮೀರದ ನೋಟ್ ಪುಸ್ತಕಗಳನ್ನು ಬಳಸುವಂತೆ ಕ್ರಮವಹಿಸುವುದು.

10 ಕಡಿಮೆ ಖರ್ಚಿನ ಹಗುರವಾದ ಹಾಗೂ ದೀರ್ಘ ಕಾಲ ಬಾಳಿಕೆ ಬರುವಂತಹ ಶಾಲಾಬ್ಯಾಗ್ ಹಾಗೂ ಇತರೆ ಸಾಮಗ್ರಿಗಳನ್ನು ಬಳಸಲು ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವುದು.

11 ಮಕ್ಕಳು ಶಾಲೆಗಳಿಗೆ ಕುಡಿಯುವ ನೀರನ್ನು ಕೊಂಡೊಯ್ಯುವುದನ್ನು ತಪ್ಪಿಸಲು ಕುಡಿಯುವ ನೀರಿನ ವ್ಯವಸ್ಥೆಯನ್ನು ಶಾಲೆಯಲ್ಲಿಯೇ ಕಲ್ಪಿಸತಕ್ಕದ್ದು.

12 ಅತಿಯಾದ ಹೊರೆ ಇರುವ ಶಾಲಾಬ್ಯಾಗ್‌ನಿಂದ ಉಂಟಾಗಬಹುದಾದ ದುಷ್ಪರಿಣಾಮಗಳ ಬಗ್ಗೆ ಪೋಷಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡುವುದು.

ಶಾಲಾ ಎಸ್.ಎಂ.ಸಿ / ಎಸ್.ಡಿ.ಎಂ.ಸಿ ಹಾಗೂ ಶಾಲಾಮುಖ್ಯಸ್ಥರು ಮೇಲ್ಕಂಡ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು.

1 ರಿಂದ 5ನೇ ತರಗತಿವರೆಗೆ ಎನ್.ಸಿ.ಇ.ಆರ್.ಟಿ ನಿಗದಿಪಡಿಸಿರುವ ಪಠ್ಯಕ್ರಮವನ್ನು ಹೊರತುಪಡಿಸಿ ಇನ್ನಾವುದೇ ಪಠ್ಯಕ್ರಮವನ್ನು ನಿಗದಿಪಡಿಸಿ ಬೋಧಿಸಿದರೆ ಅಂತಹ ಶಾಲೆಗಳ ಮಾನ್ಯತೆಯನ್ನು ರದ್ದುಪಡಿಸತಕ್ಕದ್ದು ಹಾಗೂ ಈ ಬಗ್ಗೆ ನಿಗಾವಹಿಸಲು ಶಾಲೆಗಳಿಗೆ ಭೇಟಿ ನೀಡಿ ತಪಾಸಣೆ ಮಾಡಲು ವಿಶೇಷ ತಂಡವನ್ನು ರಚಿಸತಕ್ಕದ್ದು.

ಕ್ಲಸ್ಟರ್ ಹಂತದಲ್ಲಿ ಸಿ.ಆರ್.ಪಿ ಮತ್ತು ಇ.ಸಿ.ಒಗಳು ಬ್ಲಾಕ್ ಹಂತದಲ್ಲಿ ಬಿ.ಆರ್.ಸಿ ಮತ್ತು ಬಿ.ಇ.ಒ ರವರು ಜಿಲ್ಲಾ ಹಂತದಲ್ಲಿ ಉಪನಿರ್ದೇಶಕರು (ಆಡಳಿತ) ಮತ್ತು ಪ್ರಾಂಶುಪಾಲರು ಡಯಟ್ ರವರು ಶಾಲಾಬಾಗ್ ಹೊರೆ ಕಡಿತಗೊಳಿಸುವ ಕ್ರಮಗಳನ್ನು ಅನುಷ್ಠಾನಗೊಳಿಸಿರುವ ಬಗ್ಗೆ ಶಾಲಾ ಭೇಟಿ ಮತ್ತು ಪರಿಶೀಲನೆ ಮಾಡುವುದರ ಮೂಲಕ ಖಾತ್ರಿಪಡಿಸಿಕೊಳ್ಳಲು ತಿಳಿಸಿದೆ.

R. ~

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು

**ಕ್ರಮಕ್ಕಾಗಿ,**

3. ಜಿಲ್ಲೆಗಳ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಪ್ರಾಂಶುಪಾಲರು ಡಯಟ್
4. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳು

**ಅನುಪಾಲನೆಗಾಗಿ,**

4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು
5. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗ ವಿಭಾಗ
6. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು.

**ಮಾಹಿತಿಗಾಗಿ,**

3. ಸರ್ಕಾರದ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ರವರಿಗೆ
4. ಕಛೇರಿ ಪ್ರತಿ

mEntors